ಪೋಲೀಸ್ ಇಲಾಖೆಗಳ ಸಹಯೋಗದೊಂದಿಗೆ ಬೆಂಗಳೂರಿನಲ್ಲಿ ಹಾಗೂ ರಾಜ್ಯದ ಪ್ರಮುಖ ನಗರಗಳಲ್ಲಿ ವಾಹನಗಳು ಹೊರ ಚಿಮ್ಮುವ ಹೊಗೆಯ ತಪಾಸಣೆ ಕಾರ್ಯ ಕ್ರಮಗಳನ್ನು ಕ್ರಮವಾಗಿ ನಡೆಸುತ್ತಾ ಬಂದಿದೆ. ಮಂಡಳಿಯು ಪೋಲೀಸ್ ಹಾಗೂ ಸಾರಿಗೆ ಇಲಾಖೆಗೆ ವಾಹನಗಳು ಹೊರ ಸೂಸುವ ಹೊಗೆಯು ಮಾಪನ ಮಾಡಲು ಬೇಕಾಗುವ ಉಪಕರಣಗಳನ್ನು ನೀಡಿ ಸದರಿ ಇಲಾಖೆಗಳ ಅಧಿಕಾರಿಗಳಿಗೆ ಅದನ್ನು ಉಪಯೋಗಿಸುವ ಮತ್ತು ಮಾಪನ ಮಾಡುವ ರೀತಿಯ ಬಗ್ಗೆ ತರಬೇತಿ ನೀಡಿದೆ. ವಾಹನಗಳಿಂದ ಉಂಟಾಗುವ ವಾಯು ಮಾಲಿನ್ಯವನ್ನು ಹತೋಟಿಗೆ ತರಲು ಬೆಂಗಳೂರು ನಗರದಲ್ಲಿ ಸರ್ಕಾರದ ವತಿಯಿಂದ ಸಂಬಂಧಪಟ್ಟ ಇಲಾಖೆಗಳಿಗೆ ಸೂಕ್ತ ಕ್ರಮಕ್ಕೆಗೊಳ್ಳಬೇಕೆಂದು ಸರ್ಕಾರ ಸುತ್ತೋಲೆ ಸಂಖ್ಯೆ: ಎಫ್‌ಇಇ 229 ಇಎನ್‌ವಿ 99, ದಿನಾಂಕ: 6- 1- 2000ರಲ್ಲಿ ಸೂಚನೆಗಳನ್ನು ನೀಡಲಾಗಿದೆ.

ಪ್ರಥಮ ಹಂತದಲ್ಲಿ ಬೆಂಗಳೂರು ನಗರದಲ್ಲಿ ವಾಯು ಮಾಲಿನ್ಯದ ಬಗ್ಗೆ ಜನರಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ವಾಹನಗಳ ಹೊಗೆಯಿಂದ ಉಂಟಾಗುವ ಮಾಲಿನ್ಯದಿಂದಾಗುವ ಅಪಾಯಗಳ ಬಗ್ಗೆ ಜನರಿಗೆ ತಿಳುವಳಿಕೆ ನೀಡುವ ಸಲುವಾಗಿ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು 5 ಪರಿಸರ ವಾಹಿನಿ ವ್ಯಾನ್‌ಗಳನ್ನು ಫೆಬ್ರವರಿ 1999ರಲ್ಲಿ ಪ್ರಾರಂಭಿಸಿದೆ. ಈ ವಾಹನಗಳಲ್ಲಿ ಧ್ವನಿವರ್ಧಕಗಳನ್ನು ಅಳವಡಿಸಲಾಗಿದೆ. ಹಾಗೂ ಇವು ನಗರದ ಆಯಕಟ್ಟಿನ ಸ್ಥಳಗಳಲ್ಲಿ ನಿಂತು ವಾಹನಗಳಿಂದ ಉಂಟಾಗುವ ಮಾಲಿನ್ಯಕ್ಕೆ ಕಾರಣವಾದ ಕಲಬೆರಕೆ ಇಂಧನ ವಾಹನಗಳನ್ನು ಸರಿಯಾಗಿ ನಿರ್ವಹಿಸದಿರುವುದು ಮುಂತಾದಂತಹ ವಿವಿಧ ಕಾರಣಗಳ ಬಗ್ಗೆ ಮತ್ತು ಆ ಮಾಲಿನ್ಯವನ್ನು ಕಡಿಮೆ ಮಾಡಲು ಪರಿಣಾಮಕಾರಿ ಕ್ರಮಗಳನ್ನು ತೆಗೆದುಕೊಳ್ಳಬೇಕಾದ ಅಗತ್ಯದ ಬಗ್ಗೆ ತಿಳಿಸಲಾಗುತ್ತಿದೆ. ಇದಕ್ಕಾಗಿ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಸಹಕಾರವನ್ನು ಪಡೆಯಲಾಗುತ್ತಿದೆ.

ಬೆಂಗಳೂರಿನ 5 ಪ್ರಮುಖ ಸ್ಥಳಗಳಲ್ಲಿ ವಾತಾವರಣದ ಗಾಳಿಯ ಮಾಲಿನ್ಯಕಾರಗಳನ್ನು ಮಾಪನದ ಉಪಕರಣವನ್ನು ಸ್ಥಾಪಿಸಲಾಗಿದೆ. ಹಾಗೂ ಸಾರಿಗೆ ಇಲಾಖೆಗೆ ವಾಹನಗಳಿಂದುಂಟಾಗುತ್ತಿರುವ ಮಾಲಿನ್ಯ ನಿಯಂತ್ರಿಸಲು ಸೂಕ್ತ ಕ್ರಮ ತೆಗೆದುಕೊಳ್ಳಲು ನಿರ್ದೇಶನ ನೀಡಲಾಗಿದೆ.. ಅಲ್ಲದೇ ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆಗೂ ಸಹ ಕಲಬೆರಕೆ ಇಂಧನ ಒದಗಿಸುವುದರ ಮೇಲೆ ಸೂಕ್ತ ಕ್ರಮ ತೆಗೆದುಕೊಳ್ಳಬೇಕೆಂದು ನಿರ್ದೇಶನವನ್ನು ಸಹ ನೀಡಲಾಗಿದೆ.

ರಾಜ್ಯದಲ್ಲಿರುವ ರಾಷ್ಟ್ರೀಯ ಹೆದ್ದಾರಿಗಳು.

13(394):

ಶ್ರೀ ಅರಜನಮೂರ್ತಿ (ನೆಲಮಂಗಲ): ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ತಿಳಿಸುವರೆ?

ಅ) ಕರ್ನಾಟಕ ರಾಜ್ಯದಲ್ಲಿ ಮುಖ್ಯವಾಗಿ ಲೋಕೋಪಯೋಗಿ ಇಲಾಖೆಗೆ ಸೇರಿದ ರಾಷ್ಟ್ರೀಯ ಹೆದ್ದಾರಿಗಳಲ್ಲಿ ಎಷ್ಟು ಮೇಲು ಸೇತುವೆ: ಮೋರಿಗಳು ದುಸ್ಥಿತಿಯಲ್ಲಿವೆ? ಅವುಗಳನ್ನು ವಾಹನ ಸಂಚಾರಕ್ಕೆ ಅನುಕೂಲವಾಗುವಂತೆ ಸರಿಪಡಿಸಲು ಸರ್ಕಾರ ಏನು ಕ್ರಮ ಕೈಗೊಂಡಿದೆ?

ಶ್ರೀ ಧರ್ಮಸಿಂಗ್ (ಲೋಕೋಪಯೋಗಿ ಸಚಿವರು):

ಅ) 4 ಬೃಹತ್ ಸೇತುವೆಗಳು ಮತ್ತು 133 ಮೋರಿ (ಕಿರು ಸೇತುವೆಗಳು ಸೇರಿ)ಗಳು ದುಸ್ಥಿತಿಯಲ್ಲಿರುತ್ತವೆ.

4 ಬೃಹತ್ ಸೇತುವೆಗಳಲ್ಲಿ ಒಂದು ಸೇತುವೆಯ ಪರ್ಯಾಯವಾಗಿ ಹೊಸ ಸೇತುವೆಯನ್ನು ನಿರ್ಮಿಸಲಾಗಿದೆ. ಇನ್ನೊಂದು ಪರ್ಯಾಯ ಹೊಸ ಸೇತುವೆಯ ಕೆಲಸ ಪ್ರಗತಿಯಲ್ಲಿದೆ. ಉಳಿದೆರಡು ಸೇತುವೆಗಳ ವಿನ್ಯಾಸ ಮತ್ತು ಅಂದಾಜುಗಳನ್ನು ತಯಾರಿಸಲು ಸಲಹೆಗಾರರನ್ನು ನೇಮಿಸಲಾಗಿದೆ.

ಇನ್ನು 133 ಕಿರುಸೇತುವೆ ಮತ್ತು ಮೋರಿಗಳ ಪೈಕಿ 37 ಕಿರುಸೇತುವೆ: ಮೋರಿಗಳ ದುರಸ್ತಿಯ ಕಾಮಗಾರಿಗಳು ಪ್ರಗತಿಯಲ್ಲಿವೆ. ಉಳಿದ 96 ಕಿರುಸೇತುವೆ: ಮೋರಿಗಳ ದುರಸ್ತಿ ಕಾಮಗಾರಿಗಳ ಅಂದಾಜುಪಟ್ಟಿ ತಯಾರಿಸುವ ಹಂತದಲ್ಲಿದೆ.

ಈ ದುಸ್ಥಿತಿಯಲ್ಲಿರುವ ಸೇತುವೆ: ಮೋರಿಗಳ ಮೇಲಿನ ವಾಹನ ಸಂಚಾರಕ್ಕೆ ಸಧ್ಯಕ್ಕೆ ಪರ್ಯಾಯ ವ್ಯವಸ್ಥೆ ಮಾಡಲಾಗಿದೆ.

ರಸ್ತೆ ಅಭಿವೃದ್ಧಿ ಹಾಗೂ ಕಟ್ಟಡ ನಿರ್ಮಾಣ.

14(200)

ಶ್ರೀ ಅರಗ ಜ್ಞಾನೇಂದ್ರ (ತೀರ್ಥಹಳ್ಳಿ): ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ತಿಳಿಸುವರೆ?

ಅ) 1999-2000ನೇ ಸಾಲಿನ ಆಯವ್ಯಯದಲ್ಲಿ ರಸ್ತೆ ಅಭಿವೃದ್ಧಿ ಹಾಗೂ ಕಟ್ಟಡ ನಿರ್ಮಾಣಕ್ಕಾಗಿ ಒದಗಿಸಲಾದ ಹಣ ಎಷ್ಟು?

ಆ) ಈ ಬಗ್ಗೆ ದಿನಾಂಕ 21-12-99ರವರೆಗೆ ಬಿಡುಗಡೆ ಮಾಡಿರುವ ಹಾಗೂ